# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: Hermes Distillery Pvt. Ltd., ರವರಿಗೆ ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಯಡ್ರಾವ್ ಗ್ರಾಮದಲ್ಲಿ 5.00 ಮೆ.ವ್ಯಾ. ಸಾಮರ್ಥ್ಯದ ಜೈವಿಕ ವಿದ್ಯುತ್ ಯೋಜನೆಯ ಸ್ಥಾಪನೆಗೆ ನಿರಾಕ್ಷೇಪಣಾ ನೀಡುವ ಬಗ್ಗೆ.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: H 214

* * *

ಪ್ರಸ್ತಾವನೆ :-

ಮೆ: Hermes Distillery Pvt. Ltd., ರವರು ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಯಡ್ರಾವ್ ಗ್ರಾಮದಲ್ಲಿ 5.00 ಮೆ.ವ್ಯಾ. ಸಾಮರ್ಥ್ಯದ ಜೈವಿಕ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ಮತ್ತು ಆ ಪೈಕಿ 1 ಮೆ.ವ್ಯಾ. ವಿದ್ಯುತ್ತನ್ನು ಸ್ವಂತಕ್ಕೆ ಉಪಯೋಗಿಸಿಕೊಂಡು ಬಾಕಿ ಉಳಿಯುವ 4 ಮೆ.ವ್ಯಾ. ಸಾಮರ್ಥ್ಯದ ವಿದ್ಯುತ್ತನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯ ಯೋಜನೆಯ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಏಕ ಕಡತ ಪದ್ಧತಿಯಡಿ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| ಯೋಜನಾ ಪ್ರದೇಶದ ವಿಸ್ತೀರ್ಣ | : | 6.46 ಹೆಕ್ಟೇರ್‌ಗಳು |
| ಯೋಜನಾ ವೆಚ್ಚದ ಒಟ್ಟು ಮೊತ್ತ | : | ರೂ.153.00 ಕೋಟಿಗಳು (ಡಿಸ್ಟಿಲರಿ ಮತ್ತು ಜೈವಿಕ ವಿದ್ಯುತ್ ಉತ್ಪಾದನಾ ಘಟಕವು ಒಳಗೊಂಡಂತೆ) |
| ಕಂಪನಿಯ ನೆಟ್‌ವರ್ತ್ | : | ರೂ.1341.6973 ಲಕ್ಷಗಳು |
| ಕಂಪನಿಯ CIN ಸಂಖ್ಯೆ | : | U15510KA2008PTC047379 |
| ಉತ್ಪಾದನೆಯಾಗುವ ವಿದ್ಯುತ್ತಿನ ಉಪಯೋಗದ ವಿಧಾನ | : | ಸ್ವಂತಕ್ಕೆ ಮತ್ತು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು |
| ನಿಗದಿತ ಶುಲ್ಕ ಪಾವತಿಸಲಾಗಿದೆಯೇ | : | ಹೌದು |
| ಸಮೀಪದ ಸಬ್-ಸ್ಟೇಷನ್ ವಿವರ | : | ಅಂಕಲಿ |

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಗಿನಂತೆ ಆದೇಶಿಸುತ್ತದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 248 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 24.9.2016.**

ಮೆ: Hermes Distillery Pvt. Ltd., ರವರಿಗೆ ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಯಡ್ರಾವ್ ಗ್ರಾಮದಲ್ಲಿ 5 ಮೆ.ವ್ಯಾ. ಸಾಮರ್ಥ್ಯದ ಜೈವಿಕ ಇಂಧನ ಘಟಕವನ್ನು open access/third party sale ವರ್ಗದಡಿ ಸ್ಥಾಪಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿದೆ.

1. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ ಅನುಮೋದನೆ ಪಡೆದುಕೊಳ್ಳತಕ್ಕದ್ದು;
2. ಅಭಿವೃದ್ಧಿದಾರರು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಿಂದ ವಿದ್ಯುತ್ ರವಾನೆ ವ್ಯವಸ್ಥೆ ಸಂಬಂಧ (Evacuation of Power) ಪ್ರತ್ಯೇಕವಾಗಿ ಅನುಮೋದನೆ ಪಡೆಯತಕ್ಕದ್ದು;
3. ಪ್ರಸ್ತಾಪಿತ ಜೈವಿಕ ಇಂಧನ ಘಟಕದಲ್ಲಿ ಉತ್ಪತ್ತಿಯಾಗುವ ಒಟ್ಟು ವಿದ್ಯುತ್ತಿನ ಪ್ರಮಾಣದ ಪೈಕಿ 4 ಮೆ.ವ್ಯಾ. ವಿದ್ಯುತ್ತನ್ನು ಸಂಬಂಧಿಸಿದ ಎಸ್ಕಾಂನೊಂದಿಗೆ ಮಾರಾಟ ಮಾಡುವ ಕುರಿತು ವಿದ್ಯುತ್ ಖರೀದಿ ಒಪ್ಪಂದವನ್ನು (ಪಿಪಿಎ) ಮಾಡಿಕೊಳ್ಳತಕ್ಕದ್ದು ಹಾಗೂ ಉಳಿದ 1 ಮೆ.ವ್ಯಾ. ವಿದ್ಯುತ್ತನ್ನು ಸ್ವಂತಕ್ಕೆ ಬಳಸಿಕೊಳ್ಳಲು ಅನುಮತಿಸಲಾಗಿದೆ.

--2)

4. ಅಭಿವೃದ್ಧಿದಾರರು ಉದ್ದೇಶಿತ ಜೈವಿಕ ಇಂಧನ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಸ್ವತಃ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು. ಸರ್ಕಾರದಿಂದ ಈ ಸಂಬಂಧ ಯಾವುದೇ ರೀತಿಯಲ್ಲಿ ಜಮೀನನ್ನು ಮಂಜೂರಾತಿ ಮಾಡಲಾಗುವುದಿಲ್ಲ;
5. ಮೆ: **Hermes Distillery Pvt. Ltd.,** ಕಂಪನಿಯವರು ಯೋಜನಾ ಅನುಷ್ಠಾನಕ್ಕೆ ಅನ್ವಯಿಸುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು;
6. ಮೆ: **Hermes Distillery Pvt. Ltd.,** ಕಂಪನಿಯವರು ಪ್ರಸ್ತಾಪಿತ ಜೈವಿಕ ಇಂಧನ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸತಕ್ಕದ್ದು;
7. ಅಭಿವೃದ್ಧಿದಾರರು ಈ ಸ್ಥಾವರವನ್ನು ಸ್ಥಾಪಿಸುವ ಮುನ್ನ ವಿಸ್ತೃತ ಯೋಜನಾ ವರದಿಯನ್ನು (ಡಿಪಿಆರ್) ತಯಾರಿಸಿ ಕ್ರೆಡಲ್ ಸಂಸ್ಥೆಯಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು;
8. ಮೆ: **Hermes Distillery Pvt. Ltd.,** ಕಂಪನಿಯವರು ಸ್ಥಾಪಿಸುತ್ತಿರುವ ಈ ಜೈವಿಕ ಇಂಧನ ಘಟಕಕ್ಕೆ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳ ಪ್ರಕಾರ ಅನ್ವಯವಾಗುವ ಸವಲತ್ತುಗಳು ಲಭ್ಯವಾಗುತ್ತವೆ.
9. ಮೆ: **Hermes Distillery Pvt. Ltd.,** ರವರು ಪ್ರಸ್ತಾಪಿತ ವಿದ್ಯುತ್ ಘಟಕವನ್ನು 18 ತಿಂಗಳಲ್ಲಿ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 22034674.

ಇವರಿಗೆ:
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

ಪ್ರತಿ:
1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.
6 ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
7 ಉಪ ಅರಣ್ಯ ಸಂರಕ್ಷಣಾಧಿಕಾರಿ, ಬೆಳಗಾವಿ ಜಿಲ್ಲೆ, ಬೆಳಗಾವಿ.
8 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ.
9 ಮೆ: **Hermes Distillery Private Ltd., Yadrav Village Tq., Raibag District, Belgavi.**
10 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.